ಇ) ಮೇಲ್ಕಂಡ ಅನುದಾನದಲ್ಲಿ ಸಿಂಧನೂರ ತಾಲ್ಲೂಕಿಗೆ ಬಿಡುಗಡೆಯಾದ ಹಣದ ವಿವರ ಈ ಕೆಳಕಂಡಂತೆ ಇದೆ.

(ರೂ.ಲಕ್ಷಗಳಲ್ಲಿ)

ಚಟುವಟಿಕೆ	2008–09	2009–10
ಕೃಷಿ ವಿಭಾಗ	22.40	76.60
ಇಂಜಿನಿಯರಿಂಗ್ ವಿಭಾಗ	54.62	93.90
ಒಟ್ಟು	**77.02**	**170.50**

ಈ) ಯಾವುದೇ ತಾರತಮ್ಯವಾಗಿರುವುದಿಲ್ಲ.

ಉ) ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಸಿಂಧನೂರಿನಲ್ಲಿ ಮಿನಿ ವಿಧಾನ ಸೌಧ

271 (656) ಶ್ರೀ ನಾಡಗೌಡ ವೆಂಕಟರಾವ್ (ಸಿಂಧನೂರು):–(ಮಾನ್ಯ ಕಂದಾಯ ಸಚಿವರು) ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಸಿಂಧನೂರು ತಾಲ್ಲೂಕಿನಲ್ಲಿ ಮಿನಿ ವಿಧಾನಸೌಧ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿರುವುದೇ;

ಆ) ಬಂದಿದ್ದಲ್ಲಿ, ಸಿಂಧನೂರಿನಲ್ಲಿ ಮಿನಿ ವಿಧಾನಸೌಧ ನಿರ್ಮಿಸಲ ಸರ್ಕಾರಕ್ಕಿರುವ ತೊಂದರೆಗಳೇನು ಹಾಗೂ ಮಿನಿ ವಿಧಾನಸೌಧ ನಿರ್ಮಿಸಲು ಸ್ಥಳ ಗುರುತಿಸಲಾಗಿದೆಯೆ:

ಇ) ಗುರುತಿಸಿದ್ದಲ್ಲಿ, ನಗರದ ಯಾವ ಭಾಗದಲ್ಲಿ ಮತ್ತು ಎಷ್ಟು ವಿಸ್ತೀರ್ಣದ ಸ್ಥಳವನ್ನು ಗುರುತಿಸಲಾಗಿದೆ;

ಈ) ಮಿನಿ ವಿಧಾನಸೌಧ ನಿರ್ಮಿಸಲು ಸರ್ಕಾರ ಅನುದಾನವನ್ನೇನಾದರು ನಿಗಧಿಪಡಿಸಿದೆಯೇ;

ಉ) ಹಾಗಿದ್ದಲ್ಲಿ, ಮಿನಿ ವಿಧಾನಸೌಧದ ಕಟ್ಟಡದ ಕಾಮಗಾರಿಯನ್ನು ಎಂದಿನಿಂದ ಪ್ರಾರಂಭಿಸಲಾಗುವುದು;

ಊ) ಮಿನಿ ವಿಧಾನಸೌಧದ ಕಟ್ಟಡದ ಕಾಮಗಾರಿಯನ್ನು ಪೂರ್ಣಗೊಳಿಸಲು ಸರ್ಕಾರ ಕಾಲಮಿತಿಯನ್ನು ನಿಗಧಿಪಡಿಸಿರುವುದೇ, ಎಂದು ಪೂರ್ಣಗೊಳಿಸಲಾಗುವುದು?

ಶ್ರೀ ಜಿ. ಕರುಣಾಕರ ರೆಡ್ಡಿ (ಮಾನ್ಯ ಕಂದಾಯ ಸಚಿವರು) :–

ಅ) ಬಂದಿದೆ.

ಆ) ಸಿಂಧನೂರು ನಗರದ ಸರ್ವೆ ನಂ. 767ರಲ್ಲಿ ಸ್ಥಳವನ್ನು ಗುರುತಿಸಲಾಗಿದೆ. ಸದರಿ ಸ್ಥಳದಲ್ಲಿ ಮಿನಿ ವಿಧಾನಸೌಧವನ್ನು ನಿರ್ಮಿಸಲು ಯಾವುದೇ ತೊಂದರೆಗಳಿರುವುದಿಲ್ಲ.

ಇ) ಹಳೆಯ ತಾಲ್ಲೂಕು ಕಛೇರಿಯ ಭಾಗದಲ್ಲಿ ಸರ್ವೆ ನಂ. 767ರಲ್ಲಿ 3 ಎಕರೆ 38 ಗುಂಟೆ ಪ್ರದೇಶದಲ್ಲಿ ಮಿನಿ ವಿಧಾನಸೌಧ ಕಟ್ಟಡ ನಿರ್ಮಾಣಕ್ಕಾಗಿ ಸ್ಥಳ ಗುರುತಿಸಲಾಗಿದೆ.

ಈ) ಈ ಕಾಮಗಾರಿಯ ಅಂದಾಜು ಮೊತ್ತ ರೂ.250.00 ಲಕ್ಷಗಳಲ್ಲಿ ನಿರ್ಮಿಸಲು ಸರ್ಕಾರದ ಆದೇಶ ಸಂಖ್ಯೆ: ಕಂಇ 8 ಡಬ್ಲ್ಯೂಬಿಆರ್ 2009, ದಿನಾಂಕ: 24/05/2010 ರಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಿ. ಈ ಕಾಮಗಾರಿಯನ್ನು ಕರ್ನಾಟಕ ಗೃಹ ಮಂಡಳಿಗೆ ವಹಿಸಿ ಆದೇಶಿಸಲಾಗಿದೆ.

ಉ) ಈ ಮಿನಿ ವಿಧಾನಸೌಧ ಕಟ್ಟಡ ಕಾಮಗಾರಿಗೆ ನಿವೇಶನವನ್ನು ಕರ್ನಾಟಕ ಗೃಹ ಮಂಡಳಿಗೆ ಹಸ್ತಾಂತರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಊ) ನಿವೇಶನವನ್ನು ಕರ್ನಾಟಕ ಗೃಹ ಮಂಡಳಿಗೆ ಹಸ್ತಾಂತರಿಸಿದ ನಂತರ ಸದರಿ ಮಂಡಳಿಯು ಅಂದಾಜು ಪಟ್ಟಿ ಮತ್ತು ನಕ್ಷೆ ತಯಾರಿಸಿ ಟೆಂಡರ್ ಕರೆದು ಸುಮಾರು 12 ತಿಂಗಳುಗಳಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು.

ಹೊಸ ತಾಲ್ಲೂಕು ರಚನೆ

272 (533) ಶ್ರೀ ನರೇಂದ್ರ. ಆರ್ (ಹನೂರು):–(ಮಾನ್ಯ ಕಂದಾಯ ಸಚಿವರು) ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ:–

ಅ) ಹೊಸ ತಾಲ್ಲೂಕುಗಳ ರಚನೆ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?

ಆ) ಹನೂರನ್ನು ತಾಲ್ಲೂಕು ಕೇಂದ್ರವನ್ನಾಗಿ ಘೋಷಣೆ ಮಾಡಲು ಸರ್ಕಾರಕ್ಕೆ ಇರುವ ತೊಂದರೆಗಳೇನು?

ಇ) ಹನೂರನ್ನು ತಾಲ್ಲೂಕು ಕೇಂದ್ರವನ್ನಾಗಿ ಎಂದು ಘೋಷಣೆ ಮಾಡಲಾಗುವುದು?

ಶ್ರೀ ಜಿ. ಕರುಣಾಕರ ರೆಡ್ಡಿ (ಮಾನ್ಯ ಕಂದಾಯ ಸಚಿವರು) :–

ಅ) ರಾಜ್ಯದಲ್ಲಿ ಹೊಸ ತಾಲ್ಲೂಕುಗಳನ್ನು ಪುನರ್ ರಚನೆ ಮಾಡುವ ಸಂಬಂಧ ಇದುವರೆಗೆ ಒಟ್ಟು ನಾಲ್ಕು ಸಮಿತಿಗಳು ಅಂದರೆ ಶ್ರೀ ಎಂ. ವಾಸುದೇವರಾವ್ ಆಯೋಗ, ಶ್ರೀ ಟಿ.ಎಂ, ಹುಂಡೇಕರ್ ಸಮಿತಿ, ಶ್ರೀ ಪಿ.ಸಿ. ಗದ್ದಿಗೌಡರ್ ಸಮಿತಿ ಮತ್ತು